ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು. 2005–06ನೇ ಸಾಲಿನ ಆಯವ್ಯಯದಲ್ಲಿ 10 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಹಾಗೂ 4 ಮೆಟ್ರಿಕ್ ನಂತರ ವೃತ್ತಿಪರ ವಸತಿ ನಿಲಯಗಳನ್ನು ತೆರೆಯಲು ಅವಕಾಶ ಕಲ್ಪಿಸಲಾಗಿದೆ.

ಆ) ಯಾವ ಯಾವ ಕ್ಷೇತ್ರಕ್ಕೆ ಮಂಜೂರು ಮಾಡಬೇಕು ಎಂಬುದು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಇನ್ನೂ ಮಂಜೂರಾಗಿರುವುದಿಲ್ಲ.

ಈ) ಕ್ಷೇತ್ರವಾರು ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವಾಗ ಇದನ್ನು ಪರಿಶೀಲಿಸಲಾಗುವುದು.

2721 (2462) ಶ್ರೀ ವಿ. ಸೋಮಣ್ಣ (ಬಿನ್ನಿಪೇಟೆ) :– ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಹಾಗೂ ಸುತ್ತ ಮುತ್ತ ಇರತಕ್ಕ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳೆಷ್ಟು;

ಆ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಹಾಗೂ ಸುತ್ತ ಮುತ್ತ ಪ್ರಾರಂಭಿಸಿದ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳು ಯಾವುವು;

ಇ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲಿದ್ದ ಎಷ್ಟು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳನ್ನು ಮುಚ್ಚಲಾಗಿದೆ;

ಈ) ಬೆಂಗಳೂರಿನಲ್ಲಿ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ದಿಮೆಗಳನ್ನು ಹೆಚ್ಚಾಗಿ ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು) :

ಅ) 67

ಆ) * ಬೆಂಗಳೂರು ವಿದ್ಯುತ್‌ಸರಬರಾಜು ಕಂಪನಿ ನಿಯಮಿತ

* ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ

* ಕರ್ನಾಟಕ ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ

ಇ) 10

ಈ) ಉದ್ದಿಮೆಗಳನ್ನು ಅಂದಿನ ಅವಶ್ಯಕತೆ ಮೇರೆಗೆ ಪ್ರಾರಂಭಿಸಲಾಗಿದೆ.

2722 (2306) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) :- ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸ್ತುತ ವರ್ಷ ಹೊಸ ಪಶುಸಂಗೋಪನೆ ಆಸ್ಪತ್ರೆಗಳನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಆ) ಇದ್ದಲ್ಲಿ ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಮೆರಾಜುದ್ದೀನ್ ಎನ್.ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ರಾಜ್ಯದಲ್ಲಿ ಪ್ರಸ್ತುತ ಸಾಕಷ್ಟು ಪಶುವೈದ್ಯಕೀಯ ಸಂಸ್ಥೆಗಳು ಇರುವುದರಿಂದ ಹೊಸ ಪಶು ಆಸ್ಪತ್ರೆಗಳನ್ನು ಪ್ರಾರಂಭಿಸುವ ಕಾರ್ಯಕ್ರಮ ಸರ್ಕಾರದ ಮುಂದೆ ಇಲ್ಲ. ಆದಾಗ್ಯೂ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಡಾ॥ ಡಿ.ಎಂ. ನಂಜುಡಪ್ಪನವರ ಸಮಿತಿಯ ಪ್ರಾದೇಶಿಕ ಅಸಮತೋಲನ ವರದಿಯಲ್ಲಿನ ಸಲಹೆಯಂತೆ ಬಹಳ ಹಿಂದುಳಿದ 39 ತಾಲ್ಲೂಕುಗಳಲ್ಲಿ ಕೊರತೆ ಇರುವ ಕಡೆ ತೆರೆಯಲು ಪರಿಶೀಲಿಸಲಾಗುವುದು.

ಆ) – ಮೇಲಿನಂತೆ –

2724 (2309) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) :- ಮಾನ್ಯ ಭಾರಿ, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಣ್ಣ ಕೈಗಾರಿಕೆಗಳ ಸಬ್ಸಿಡಿ ಹಣ ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಬ್ಸಿಡಿ ಹಣ ತ್ವರಿತವಾಗಿ ಬಿಡುಗಡೆ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ?